**01-K**

# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ

**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560003**

**KARNATAKA SCHOOL EXAMINATION AND ASSESSMENT BOARD**

**6th Cross, Malleshwaram, Bengaluru – 560 003**

## 2025–26 ರ ಎಸ್.ಎಸ್.ಎಲ್.ಸಿ. ಮಾದರಿ ಪ್ರಶ್ನೆಪತ್ರಿಕೆ – 2

## S.S.L.C. MODEL QUESTION PAPER - 2 : 2025 - 26

## ವಿಷಯ : ಪ್ರಥಮ ಭಾಷೆ – ಕನ್ನಡ

## Subject : First Language — KANNADA

**ವಿಷಯ ಸಂಕೇತ : 01-K** | **Subject Code : 01-K**

ಸಮಯ : 3 ಗಂಟೆ 15 ನಿಮಿಷಗಳು ] | [ Time : 3 Hours 15 Minutes

ಗರಿಷ್ಠ ಅಂಕಗಳು : 100 ] | [ Max. Marks : 100

---

**ಪರೀಕ್ಷಾರ್ಥಿಗಳಿಗಾಗಿ ಸಾಮಾನ್ಯ ಸೂಚನೆಗಳು :**

1. ಈ ಪ್ರಶ್ನೆಪತ್ರಿಕೆಯು ಒಟ್ಟು 45 ಪ್ರಶ್ನೆಗಳನ್ನು ಹೊಂದಿದೆ.
2. ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
3. ಬಲಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
4. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವೂ ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

[ Turn over

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ : 6 X 1 = 6**

1. ಕನ್ನಡ ವರ್ಣಮಾಲೆಯ ಪ್ರತಿ ವರ್ಗದ ಎರಡು ಮತ್ತು ನಾಲ್ಕನೆಯ ಅಕ್ಷರಗಳು

   (ಎ) ಅಲ್ಪಪ್ರಾಣಾಕ್ಷರಗಳು

   (ಬಿ) ಮಹಾಪ್ರಾಣಾಕ್ಷರಗಳು

   (ಸಿ) ಅನುನಾಸಿಕಾಕ್ಷರಗಳು

   (ಡಿ) ಯೋಗವಾಹಗಳು

2. 'ಮದೋನ್ಮತ್ತ' ಪದವು ಈ ಸಂಧಿಗೆ ಉದಾಹರಣೆಯಾಗಿದೆ

   (ಎ) ಲೋಪ

   (ಬಿ) ಆಗಮ

   (ಸಿ) ವೃದ್ಧಿ

   (ಡಿ) ಗುಣ

3. ಸ್ವತಂತ್ರ ವಾಕ್ಯಗಳಾಗಿ ನಿಲ್ಲಬಲ್ಲ ಅನೇಕ ಉಪವಾಕ್ಯಗಳೊಡನೆ ಒಂದು ಪೂರ್ಣಾಭಿಪ್ರಾಯದ ವಾಕ್ಯವಾಗಿದ್ದರೆ ಅದು

   (ಎ) ಸಂಯೋಜಿತವಾಕ್ಯ

   (ಬಿ) ಸಾಮಾನ್ಯವಾಕ್ಯ

   (ಸಿ) ಮಿಶ್ರವಾಕ್ಯ

   (ಡಿ) ಸಮ್ಮಿಶ್ರವಾಕ್ಯ

4. ಭವಿಷತ್‌ಕಾಲ ಸೂಚಕ ಪ್ರತ್ಯಯವಿದು

   (ಎ) ದ

   (ಬಿ) ಉತ್ತ

   (ಸಿ) ಉವ

   (ಡಿ) ಉದ

5. 'ತೃತೀಯಾ' ವಿಭಕ್ತಿಯ ಕಾರಕಾರ್ಥ

   (ಎ) ಸಂಪ್ರದಾನ

   (ಬಿ) ಅಪಾದಾನ

   (ಸಿ) ಕರ್ಮಾರ್ಥ

   (ಡಿ) ಕರಣಾರ್ಥ

6. 'ಕಳ್ಗುಡಿದ' ಪದವು ಈ ಸಮಾಸಕ್ಕೆ ಸೇರಿದೆ

   (ಎ) ತತ್ಪುರುಷ

   (ಬಿ) ದ್ವಿಗು

   (ಸಿ) ಕ್ರಿಯಾ

   (ಡಿ) ಗಮಕ

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ :** **4 X 1 = 4**

7. ವಿದ್ಯಾಧರ : ಬಿಜ್ಜೋದರ : : ವೈಶಾಖ : ..................... .
8. ವಿದ್ವಾಂಸ : ಅನ್ವರ್ಥನಾಮ : : ಸಹದೇವ : ..................... .
9. ಹುಳಹುಪ್ಪಡಿ : ಜೋಡುನುಡಿ : : ಬಟ್ಟಬಯಲು : ..................... .
10. ಜಾಣತನ : ತದ್ಧಿತಾಂತ ಭಾವನಾಮ : : ಚಂದ್ರನಂತೆ : ..................... .

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ :** **7 X 1 = 7**

11. ಎಣ್ಣೆ ತುಪ್ಪದ ಮಿಶ್ರಣ ಬೇಡವೆಂದು ಹೇಳಿದವರು ಯಾರು?
12. ಶಾನುಭೋಗರ ರಾಜಭಕ್ತಿಯ ಲಾಂಛನ ಯಾವುದು?
13. ಆಂಗ್ಲ ಸಾಮ್ರಾಜ್ಯದ ವೈಭವ ಕಂಡುಬರುವ ಓಣಿ ಯಾವುದು?
14. ಕೌಸಂಬಿಯ ಅರಸ ಯಾರು?
15. ಬೇಡರಿಗೆ ಅಗಸಿಗೆ ಬಂದು ಬುದ್ದಿ ಮಾತನ್ನು ಹೇಳಿದವರು ಯಾರು?
16. ದ್ರೋಣನು ಪರುಶುರಾಮರಲ್ಲಿಗೆ ಏಕೆ ಬಂದನು?
17. ಪುಟ್ಟ ಪೋರಿಯ ಅಮ್ಮ ಗುಡಿಸಲಿನಲ್ಲಿ ಹೇಗೆ ಮಲಗಿದ್ದಾಳೆ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** **10 X 2 = 20**

18. ಲಿಪಿಯ ಮೂಲಕ ಜ್ಞಾನ ಭಂಡಾರ ಯಾವ ರೀತಿ ಭದ್ರವಾಯಿತು?
19. ವಿಶ್ವೇಶ್ವರಯ್ಯ ಅವರು ಹಣಕಾಸು ನೀತಿಯಲ್ಲಿ ಮಾಡಿದ ಮಾರ್ಪಾಡುಗಳಾವುವು?
20. ಟೊಪ್ಪಿಗೆಯ ವಿಶೇಷತೆಯನ್ನು ಲೇಖಕರು ಹೇಗೆ ದಾಖಲಿಸಿದ್ದಾರೆ?
21. ರಾಜಸಭೆಯಲ್ಲಿ ಅಗ್ನಿಭೂತಿ ವಾಯುಭೂತಿಯರನ್ನು ಮೂರ್ಖರೆಂದು ತೀರ್ಮಾನಿಸಿದ್ದೇಕೆ?
22. ಹಕ್ಕಿಯ ಹಾರಾಟವನ್ನು ಆಕಾಶಕ್ಕೆ ಹೇಗೆ ಹೋಲಿಸಿದ್ದಾರೆ?
23. ದಂಡು ಹಲಗಲಿಯ ಮೇಲೆ ಹೇಗೆ ದಾಳಿ ನಡೆಸಿತು?
24. ಭಗತ್‌ಸಿಂಗ್ ಜಲಿಯನ್ ವಾಲಾಬಾಗ್ ಮಾರಣಹೋಮದಿಂದ ತೆಗೆದುಕೊಂಡ ನಿರ್ಧಾರವನ್ನು ತಿಳಿಸಿ.
25. ಅಂದವಾದ ಬರೆವಣಿಗೆಯ ಬಗ್ಗೆ ಗಾಂಧೀಜಿಯವರ ಅಭಿಪ್ರಾಯವನ್ನು ಬರೆಯಿರಿ.
26. ಜ್ಞಾನಿ–ಅಜ್ಞಾನಿಗಳ ಸಂಗದ ಬಗೆಗಿನ ಅಕ್ಕಮಹಾದೇವಿಯ ಅಭಿಪ್ರಾಯವನ್ನು ತಿಳಿಸಿ.
27. ರಾಜರ ಪ್ರಕೃತಿ ಹೇಗಿರುತ್ತದೆ?

**V. ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು/ ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :**

**2 X 3 = 6**

28. ಸಾರಾ ಅಬೂಬಕ್ಕರ್
29. ರನ್ನ

**VI.** **ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ :** **1 X 3 = 3**

30. ಎನೆ ಕೃತಘ್ನನೆ ನರಕಿ ವಿದ್ಯಾ
ಧನ ಮದಾಂಧನೆ ಬಾಹಿರನು ಹೊ
ಕ್ಕನುವರವ ಹಿಂಗುವ ಮಹೀಪತಿ ಜೀವವಿರೆ ಮೃತನು

**VII.** **ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** **1 X 3 = 3**

31. "ಭೀಮ ದುರ್ಯೋಧನರು ಮದಗಜಗಳಂತೆ ಹೋರಾಡಿದರು."

**VIII.** **ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ತ್ವದೊಂದಿಗೆ ವಿಸ್ತರಿಸಿ ಬರೆಯಿರಿ :** **1 X 3 = 3**

32. ಸತ್ಯಕ್ಕೆ ಸಾವಿಲ್ಲ; ಸುಳ್ಳಿಗೆ ಸುಖವಿಲ್ಲ.

**ಅಥವಾ**

ದೇಶ ಸುತ್ತಿ ನೋಡು; ಕೋಶ ಓದಿ ನೋಡು.

**IX.** **ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ :** **6 X 3 = 18**

33. "ನಾನು ಮುಖಮೇಲಾಗಿ ಬಿದ್ದಿದ್ದೆನೆ?"
34. "ಸಾಮಾಜಿಕ ಕಾನೂನುಗಳ ಹರಿಕಾರ."
35. "ಹಾಗಾದರೆ ನಿಮಗೆಲ್ಲಾ ಮನೆ ಉಂಟಾ ನನ್ನ ಮಕ್ಕಳಾ?"
36. "ಮಂಗಳ ಲೋಕದ ಅಂಗಳಕೇರಿ"
37. "ಹಸುರುಹಸುರಿಳೆಯುಸಿರೂ"
38. "ಈಗಳೊಂದಡಕೆಯುಮಿಲ್ಲ ಕೈಯೊಳ್"

**X.** **ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** **1 X 4 = 4**

39. ಕೊರಳಸೆರೆ ಹಿಗ್ಗಿದವು ದೃಗುಜಲ

..........................................................................

..........................................................................

..........................................................................

..........................................................................

ನರುಹಿ ಕೊಂದನು ಹಲವು ಮಾತೇನೆಂದು ಚಿಂತಿಸಿದ

**ಅಥವಾ**

ಮಾರಿಗೌತಣವಾಯ್ತು ನಾಳಿನ

..........................................................................

..........................................................................

..........................................................................

..........................................................................

ವೀರರೈವರ ನೋಯಿಸೆನು ರಾಜೀವಸಖನಾಣೆ

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ : 1 X 4 = 4**

40. ಉರ್ವಿಯೊಳ್ ಕೌಸಲ್ಯೆ ಪಡೆದ ಕುವರಂ ರಾಮ
ನೊರ್ವನೇ ವೀರನಾತನ ಯಜ್ಞತುರಗಮಿದು
ನಿರ್ವಹಿಸಲಾರ್ಪರಾರಾದೊಡಂ ತಡೆಯಲೆಂದಿರ್ದ ಲೇಖನವನೋದಿ
ಗರ್ವಮಂ ಬಿಡಿಸದಿರ್ದೊಡೆ ತನ್ನ ಮಾತೆಯಂ
ಸರ್ವಜನಮುಂ ಬಂಜೆಯೆನ್ನದಿರ್ದಪುದೆ ತನ
ಗುರ್ವತೋಳ್ಗಳಿವೇತಕೆಂದು ಸಲೆ ವಾಸಿಯಂ ತೊಟ್ಟು ಲವನುರಿದೆದ್ದನು

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 2 X 4 = 8**

41. 'ತಾಳಿದವನು ಬಾಳಿಯಾನು' ಎಂಬ ಮಾತು ಶಬರಿಯ ಪಾಲಿಗೆ ನಿಜವಾದ ಬಗೆಯನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

**ಅಥವಾ**

ಶಬರಿಯ ಸಡಗರ, ಸಂತೋಷ ಮೇಳದವರ ಹಾಡಿನಲ್ಲಿ ಹೇಗೆ ವರ್ಣಿತವಾಗಿದೆ? ತಿಳಿಸಿ.

42. ಸಂಕಲ್ಪ ಮತ್ತು ಅನುಷ್ಠಾನ ಕುರಿತು ಕವಿ ಶಿವರುದ್ರಪ್ಪನವರ ಅಭಿಪ್ರಾಯವನ್ನು ವಿವರಿಸಿ.

**ಅಥವಾ**

ಜೀವನದಲ್ಲಿರಬೇಕಾದ ಧನಾತ್ಮಕ ಭಾವನೆ ಹಾಗೂ ದೃಢಸಂಕಲ್ಪದ ಮಹತ್ತ್ವವನ್ನು ಜಿ. ಎಸ್. ಶಿವರುದ್ರಪ್ಪನವರು ಸಂಕಲ್ಪಗೀತೆ ಕವನದಲ್ಲಿ ಹೇಗೆ ವ್ಯಕ್ತಪಡಿಸಿದ್ದಾರೆ?

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ : 1 X 4 = 4 (2+2)**

43. ನಮ್ಮ ಮನೆಯ ಹಿತ್ತಲಿನಲ್ಲಿ ಮನೆಯ ಸುತ್ತಮುತ್ತಲಿನಲ್ಲಿಯೇ ಇರುವ ಸಸ್ಯಗಳ ನಾರು, ಬೇರು, ಕಾಂಡ, ಎಲೆ, ಹೂ, ಬೀಜ, ಹಣ್ಣು, ತೊಗಟೆ ಮೊದಲಾದವುಗಳನ್ನು ಅನೇಕ ಖಾಯಿಲೆಗಳಿಗೆ ಔಷಧಗಳಾಗಿ ಬಳಸಬಹುದಾಗಿದೆ. ಆದರೆ ಅವು ಕಣ್ಣಮುಂದೆ ಇದ್ದರೂ ಅದರ ಪ್ರಯೋಜನ ಗೊತ್ತಿಲ್ಲದೆ ಸಾವಿರಾರು ರೂಪಾಯಿಗಳನ್ನು ಕೊಟ್ಟು ನಾನಾ ಔಷಧಿಗಳನ್ನು ಕೊಳ್ಳುತ್ತಿದ್ದೇವೆ. ಹೀಗಾಗಿ 'ಹಿತ್ತಲಗಿಡ ಮದ್ದಲ್ಲ' ಎಂಬ ಗಾದೆ ಹುಟ್ಟಿಕೊಂಡಿದೆ. 'ಬೇವು ಅಧರಕ್ಕೆ ಕಹಿ; ಉದರಕ್ಕೆ ಸಿಹಿ.' ಬೇವಿನೆಲೆಯು ರಕ್ತಶುದ್ಧಿ ಗುಣವನ್ನು ಹೊಂದಿರುವುದರಿಂದ ಚರ್ಮರೋಗ ನಿವಾರಣೆಗೆ ಉಪಯುಕ್ತ. ಯುಗಾದಿ ಹಬ್ಬದ ಕಾಲದಲ್ಲಿ ಬೇವಿನೆಲೆ, ಹೂ ಸೇವನೆ ಬಹಳ ಪರಿಣಾಮಕಾರಿಯಾಗಿರುತ್ತದೆ. ಬೇವಿನಸೊಪ್ಪನ್ನು ಅರಿಶಿನದೊಂದಿಗೆ ಅರೆದು ಚರ್ಮಕ್ಕೆ ಹಚ್ಚುವುದರಿಂದ ಶೀತ ಪಿತ್ತದಿಂದ ತುರಿಕೆ, ಕಜ್ಜಿ ಉಂಟಾಗಿದ್ದರೆ ನಿವಾರಣೆಯಾಗುತ್ತದೆ. ಕೃಷ್ಣತುಳಸಿ ಎಲೆಯ ರಸವನ್ನು ಜೇನುತುಪ್ಪದೊಂದಿಗೆ ಸೇವಿಸುವುದರಿಂದ ಕೆಮ್ಮು ನಿವಾರಣೆಯಾಗುತ್ತದೆ. ಕೃಷ್ಣತುಳಸಿ ಎಲೆಯನ್ನು ಉಪ್ಪಿನೊಂದಿಗೆ ಜಜ್ಜಿ ರಸ ಹಚ್ಚುವುದರಿಂದ ತುರಿಕಜ್ಜಿ ಗುಣವಾಗುವುದು. ಅಮೃತಬಳ್ಳಿಯಂತೂ ನಾನಾ ರೋಗಗಳಿಗೆ ಪರಮೌಷಧವಾಗಿದೆ. ಅಮೃತಬಳ್ಳಿಯ ರಸ ಅಥವಾ ಕಷಾಯ ಸೇವಿಸುವುದರಿಂದ ಜ್ವರ ನಿವಾರಣೆಯಾಗುತ್ತದೆ. ಕೀಲುನೋವಿಗೆ ಅಮೃತದ ಕಾಂಡ ಮತ್ತು ಶುಂಠಿಪುಡಿಯಿಂದ ತಯಾರಿಸಿದ ಕಷಾಯ ಉಪಯುಕ್ತ. ಅಮೃತಬಳ್ಳಿಯ

ಸೋಂಕು ನಿರೋಧಕಶಕ್ತಿಯನ್ನು ಹೊಂದಿದೆ. ನೆಗಡಿ, ಕಫ, ಕೆಮ್ಮು ಇದ್ದಾಗ ಜೇನಿನೊಂದಿಗೆ ಅಮೃತಬಳ್ಳಿ ಎಲೆಯ ಸೇವನೆ ರೋಗ ಶಮನಕ್ಕೆ ಸಹಕಾರಿಯಾಗುತ್ತದೆ. ಇಂತಹ ಉಪಯೋಗಕಾರಿ ಸಸ್ಯಗಳು ಪ್ರಕೃತಿಯ ಕೊಡುಗೆಯಾಗಿದೆ. ಇವುಗಳನ್ನು ಬೆಳೆಸಿ ಸರಿಯಾಗಿ ಅರಿತು ಬಳಸಿದರೆ ಇವು ಆರೋಗ್ಯ ಸಂಜೀವಿನಿಯೇ ಆಗಿವೆ.

**ಪ್ರಶ್ನೆಗಳು :**

ಅ) ಅಮೃತಬಳ್ಳಿಯ ಸೇವನೆ ಮನುಷ್ಯನ ನಾನಾ ರೋಗಗಳಿಗೆ ಹೇಗೆ ಪರಮೌಷಧವಾಗಿದೆ?

ಆ) ಬೇವಿನ ಉಪಯೋಗಗಳನ್ನು ತಿಳಿಸಿ.

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ : 1 X 5 = 5**

44. ನಿಮ್ಮನ್ನು ಮೈಸೂರಿನ ವಿಜಯನಗರ ಬಡಾವಣೆಯ ನಿವಾಸಿ 'ಮೋಹನ್‌ಕುಮಾರ್' ಎಂದು ಭಾವಿಸಿಕೊಂಡು, ನಿಮ್ಮ ಬಡಾವಣೆಗೆ 'ಸಾರ್ವಜನಿಕ ಗ್ರಂಥಾಲಯ' ವನ್ನು ಮಂಜೂರು ಮಾಡುವಂತೆ ಕೋರಿ, ಜಿಲ್ಲಾಧಿಕಾರಿಗಳಿಗೆ ಪತ್ರವನ್ನು ಬರೆಯಿರಿ.

**ಅಥವಾ**

ನಿಮ್ಮನ್ನು ರಾಮನಗರದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ 'ಹರ್ಷಿತ' ಎಂದು ಭಾವಿಸಿಕೊಂಡು, ವಾರ್ಷಿಕ ಪರೀಕ್ಷೆಯ ಸಿದ್ಧತೆಯನ್ನು ಕುರಿತು ಮಂಡ್ಯದ ಸುಭಾಷ್ ನಗರದಲ್ಲಿ ವಾಸವಾಗಿರುವ 'ಬಸವರಾಜಪ್ಪ' ಎಂಬ ಹೆಸರಿನ ತಂದೆಗೆ ಪತ್ರವನ್ನು ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯಕ್ಕೆ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ : 1 X 5 = 5**

45. ರಾಷ್ಟ್ರೀಯ ಭಾವೈಕ್ಯ.

**ಅಥವಾ**

ಶಾಲಾ ಸಂಸತ್ತು ಚುನಾವಣಾ ಪ್ರಕ್ರಿಯೆ ಹಾಗೂ ಮಹತ್ತ್ವ.